ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ರೈಲ್ವೆ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 21/3/2020

# ರೈಲು ಯೋಜನೆಗೆ ಒಪ್ಪಿಗೆ

## ಹುಬ್ಬಳ್ಳಿ-ಅಂಕೋಲಾ ಮಾರ್ಗದ ಕನಸು ನನಸು

**ಬೆಂಗಳೂರು:** ಬಹುದಿನಗಳಿಂದ ನನೆಗುದಿಗೆ ಬಿದ್ದಿದ್ದ ಹುಬ್ಬಳ್ಳಿ-ಅಂಕೋಲಾ ರೈಲು ಯೋಜನೆಗೆ ಪರಿಸರವಾದಿಗಳು ಹಾಗೂ ಅರಣ್ಯ ಇಲಾಖೆಯ ವಿರೋಧದ ನಡುವೆಯೇ ರಾಜ್ಯ ವನ್ಯಜೀವಿ ಮಂಡಳಿ ಒಪ್ಪಿಗೆ ನೀಡಿದೆ.

ಕಳೆದ ವಾರವಷ್ಟೇ ರಾಜ್ಯ ವನ್ಯಜೀವಿ ಮಂಡಳಿ ಯೋಜನೆ ಕೈಬಿಡುವ ನಿರ್ಧಾರ ಪ್ರಕಟಿಸಿತ್ತು. ಆದರೆ, ಈಗ ಹಿಂದಿನ ನಿರ್ಧಾರ ವಾಪಸ್ ಪಡೆದು ಯೋಜನೆಗೆ ಅನುಮತಿ ನೀಡುವಂತೆ ಕೇಂದ್ರಕ್ಕೆ ಶಿಫಾರಸು ಮಾಡಲು ಮಂಡಳಿ ನಡೆಸಿದ ಸಭೆಯಲ್ಲಿ ನಿರ್ಧರಿಸಲಾಗಿದೆ.

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಉತ್ತರ ಕರ್ನಾಟಕ ಭಾಗದ ಜನಪ್ರತಿನಿಧಿಗಳಾದ ಕೈಗಾರಿಕಾ ಸಚಿವ ಜಗದೀಶ್ ಶೆಟ್ಟರ್, ಹಳಿಯಾಳ ಶಾಸಕ ಆರ್.ವಿ.ದೇಶಪಾಂಡೆ, ಕಾರ್ಮಿಕ ಸಚಿವ ಹಾಗೂ ಯಲ್ಲಾಪುರ ಶಾಸಕ ಶಿವರಾಂ ಹೆಬ್ಬಾರ್ ಯೋಜನೆಗಾಗಿ ಒತ್ತಾಯಿಸಿದರು. ಆದರೆ ಅರಣ್ಯ ಸಚಿವ ಆನಂದ್ ಸಿಂಗ್ ಅವರು ಗೈರಾಗಿದ್ದುದು ವಿಶೇಷ.

ವನ್ಯಜೀವಿ ಮಂಡಳಿ ಸದಸ್ಯರು, ಅರಣ್ಯ ಇಲಾಖೆ ಈ ಯೋಜನೆ ಜಾರಿಯಿಂದ ಪರಿಸರ ಹಾಗೂ ಜೀವ ಸಂಕುಲ ಮತ್ತು ಜೀವ ವೈವಿಧ್ಯತೆಯ ಮೇಲೆ ಆಗುವ ಪರಿಣಾಮಗಳ ಬಗ್ಗೆ ಮನವರಿಕೆ ಮಾಡುವ ಪ್ರಯತ್ನ ಮಾಡಿದ್ದಾರೆ ಎಂದು ತಿಳಿದು ಬಂದಿದೆ. ಆದರೆ, ರಾಜ್ಯದ ಅಭಿವೃದ್ಧಿಗೆ, ವಿಶೇಷವಾಗಿ ಉತ್ತರ ಕರ್ನಾಟಕ ಭಾಗದಲ್ಲಿ ಕೈಗಾರಿಕಾ ಅಭಿವೃದ್ಧಿ ಮತ್ತು ರಫ್ತು ಉದ್ಯಮಕ್ಕೆ ಹೆಚ್ಚಿನ ಆದ್ಯತೆ ನೀಡಲು ಈ ಯೋಜನೆ ಅಗತ್ಯವಿದೆ ಎಂದು ಕೈಗಾರಿಕಾ ಸಚಿವ ಜಗದೀಶ್ ಶೆಟ್ಟರ್ ಸಭೆಗೆ ಮನವರಿಕೆ ಮಾಡಿಕೊಡುವ ಪ್ರಯತ್ನ ನಡೆಸಿದ್ದಾರೆ ಎಂದು ತಿಳಿದು ಬಂದಿದೆ.



> ಹುಬ್ಬಳ್ಳಿ-ಅಂಕೋಲಾ ಯೋಜನೆಗೆ ಸಾಕಷ್ಟು ಹೋರಾಟ ಮಾಡಲಾಗಿದೆ. ಈ ಯೋಜನೆ ಜಾರಿಯಿಂದ ಉತ್ತರ ಕರ್ನಾಟಕ ಭಾಗದಲ್ಲಿ ಔದ್ಯೋಗಿಕ ಹಾಗೂ ರಫ್ತು ಉದ್ಯಮಕ್ಕೆ ಹೆಚ್ಚಿನ ಅನುಕೂಲವಾಗಲಿದೆ.
> • ಜಗದೀಶ್ ಶೆಟ್ಟರ್, ಕೈಗಾರಿಕಾ ಸಚಿವ

**ಶೆಟ್ಟರ್ ಹೇಳಿದ್ದೇನು?:** ಹುಬ್ಬಳ್ಳಿ ಅಂಕೋಲಾ ಯೋಜನೆ ಸಾಧ್ಯಾಸಾಧ್ಯತೆಯ ಕುರಿತು ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಸೈನ್ಸ್ ವರದಿ ನೀಡಿದೆ.

▶ 9ನೇ ಪುಟಕ್ಕೆ